## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ ಲೆಕ್ಕಶೀರ್ಷಿಕೆ:2515-00-102-0-08 ರಡಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ನಿರ್ದೇಶಕರು, ಅ.ನ.ಸಾ.ರಾ.ಗ್ರಾ&ಪಂ.ರಾ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ: SIRD/ACT/CR-03/2020-21, ದಿನಾಂಕ:19-04-2022
2. ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2022, ದಿನಾಂಕ:04-04-2022.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಪತ್ರದಲ್ಲಿ 2022-23ನೇ ಸಾಲಿನ ಆಯವ್ಯಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ, ಪ್ರಾದೇಶಿಕ ಕೇಂದ್ರಗಳಾದ ಕಲಬುರಗಿ ಮತ್ತು ಧಾರವಾಡ ಹಾಗೂ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ, ಬೆಂಗಳೂರು ಇಲ್ಲಿನ ಆಡಳಿತಾತ್ಮಕ ಮತ್ತು ಅಧಿಕಾರಿ/ಸಿಬ್ಬಂದಿಗಳ ವೇತನ ಲೆಕ್ಕ ಶೀರ್ಷಿಕೆ 2515-00-102-0-08ರ ಉಪ ಶೀರ್ಷಿಕೆ "101" (ಸಹಾಯಾನುದಾನ-ವೇತನಗಳು) ರಡಿ ರೂ.327.00 ಲಕ್ಷಗಳ ಅನುದಾನವನ್ನು, "103" (ಸಹಾಯಾನುದಾನ-ಸಾಮಾನ್ಯ) ರಡಿ ರೂ.105.00 ಲಕ್ಷ ಹಾಗೂ ಉಪ ಶೀರ್ಷಿಕೆ "115" (ಸಹಾಯಾನುದಾನ-ಗುತ್ತಿಗೆ/ಹೊರಗುತ್ತಿಗೆ) ರಡಿಯಲ್ಲಿ ರೂ.160.00 ಲಕ್ಷ ಮತ್ತು ಉಪ ಶೀರ್ಷಿಕೆ "386" (ನಿರ್ಮಾಣ) ರಡಿಯಲ್ಲಿ ರೂ.1000.00 ಲಕ್ಷ ಅನುದಾನವನ್ನು ಒಟ್ಟು ರೂ.1592.00 ಲಕ್ಷ ಅನುದಾನವನ್ನು ನಿಗಧಿಪಡಿಸಲಾಗಿದ್ದು, 2022-23ನೇ ಸಾಲಿನಲ್ಲಿ ಸಂಸ್ಥೆಯ ಮತ್ತು ಸಂಸ್ಥೆಯ ಅಧೀನ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ ವೇತನವನ್ನು ಪಾವತಿಸಲು ಮತ್ತು ಸಂಸ್ಥೆಯ ಸಾದಿಲ್ವಾರು ವೆಚ್ಚವನ್ನು ಭರಿಸಲು ಅನುದಾನದ ಅವಶ್ಯಕತೆಯಿರುವುದರಿಂದ, ಸಂಸ್ಥೆಗೆ ನಿಗಧಿಪಡಿಸಲಾಗಿರುವ ಒಟ್ಟು ಅನುದಾನದಲ್ಲಿ, 2022-23ನೇ ಸಾಲಿಗೆ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆ, ಮೈಸೂರು ಇವರು ಕೋರಿರುತ್ತಾರೆ.

ಮೇಲೆ ಓದಲಾದ(2)ರ ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2022, ದಿನಾಂಕ: 04-04-2022ರಲ್ಲಿ ಮೊದಲನೇ ಕಂತಿನ ಹಣ ಬಿಡುಗಡೆಗೆ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.

ಅದರಂತೆ, ಮೇಲೆ ಓದಲಾದ (1)ರ ದಿನಾಂಕ:19-04-2022ರಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆ ಇವರು ಕೋರಲಾದಂತೆ, 2022-23ನೇ ಸಾಲಿನ

ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ:2515-00-102-0-08ರಡಿ ಒದಗಿಸಲಾದ ರೂ.1592.00ಲಕ್ಷಗಳ ಅನುದಾನದಲ್ಲಿ ಮೇಲೆ ಓದಲಾದ(2)ರ ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಪಿಫ್‌ಪಿ 2022, ದಿನಾಂಕ: 04-04-2022ರನ್ವಯ ಮೊದಲನೇ ಕಂತಿನ (ಏಪ್ರಿಲ್, ಮೇ & ಜೂನ್-2022) ಅನುದಾನವಾಗಿ ರೂ.398.00 ಲಕ್ಷಗಳನ್ನು (ಮೂರು ನೂರ ತೊಂಭತ್ತೆಂಟು ಲಕ್ಷ ರೂಪಾಯಿಗಳು ಮಾತ್ರ) ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆಗೆ ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 224 ಜಿಪಸ 2022, ದಿನಾಂಕ:06-05-2022.

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗೆ ಲೆಕ್ಕಶೀರ್ಷಿಕೆ:2515-00-102-0-08ರಡಿ ರೂ.1592.00ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಿನ (ಏಪ್ರಿಲ್, ಮೇ & ಜೂನ್-2022) ಅನುದಾನವಾಗಿ ರೂ.398.00 ಲಕ್ಷಗಳನ್ನು (ಮೂರು ನೂರ ತೊಂಭತ್ತೆಂಟು ಲಕ್ಷ ರೂಪಾಯಿಗಳು ಮಾತ್ರ) ಈ ಕೆಳಕಂಡ ಕೋಷ್ಟಕದನ್ವಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಂಸ್ಥೆಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

| ಕ್ರ.ಸಂ | ಲೆಕ್ಕ ಶೀರ್ಷಿಕೆ | 2022-23ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನ (ರೂ. ಲಕ್ಷಗಳಲ್ಲಿ) | ಏಪ್ರಿಲ್-2022 ರಿಂದ ಜೂನ್-2022 ರವರೆಗೆ ಬಿಡುಗಡೆಗೊಳಿಸಿರುವ ಮೊದಲನೇ ತ್ರೈಮಾಸಿಕ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| 1. | 2515-00-102-0-08-101 ( ಸಹಾಯಾನುದಾನ-ವೇತನಗಳು ) | 327.00 | 81.75 |
| 2. | 2515-00-102-0-08-103 ( ಸಹಾಯಾನುದಾನ-ಸಾಮಾನ್ಯ ) | 105.00 | 26.25 |
| 3. | 2515-00-102-0-08-115 (ಸಹಾಯಾನುದಾನ-ಗುತ್ತಿಗೆ/ ಹೊರಗುತ್ತಿಗೆ ) | 160.00 | 40.00 |
| 4. | 2515-00-102-0-08-386 (ನಿರ್ಮಾಣ) | 1000.00 | 250.00 |
| ಒಟ್ಟು | | 1592.00 | 398.00 |

ಸದರಿ ಅನುದಾನವನ್ನು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆ ಮಾಡುವ ಸಂಬಂಧ ಖಜಾನೆ-2ರ ಮೂಲಕ ಉಪ ನಿರ್ದೇಶಕರು (ಗ್ರಾಮೀಣಾಭಿವೃದ್ಧಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಡಿಡಿಓ ಕೋಡ್:21877O ಗೆ ಜಮಾ ಮಾಡತಕ್ಕದ್ದು".

ಈ ಆದೇಶವನ್ನು ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2022, ದಿನಾಂಕ:04-04-2022 ರನ್ವಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

M.M. Raju 6/5/22

**(ಎಂ.ಎಂ.ರಾಜು)**

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

6/5/22

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಮೈಸೂರು/ ಕಲಬುರ್ಗಿ/ಧಾರವಾಡ ಜಿಲ್ಲೆ.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
8. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
9. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ.ಪ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.